**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಡಾಧಿಕಾರಿಗಳ ನ್ಯಾಯಾಲಯ, ಹೆಚ್.ಡಿ.ಕೋಟೆ**

**ಸಿ.ಸಿ. ನಂ. 309/13**

**ಸಿ.ಡಬ್ಲ್ಯೂ-4 ಪಿ.ಡಬ್ಲ್ಯೂ-3**

| | | |
|---|---|---|
| ಸಾಕ್ಷಿದಾರರ ಹೆಸರು | : | ಸಿದ್ದರಾಜು |
| ತಂದೆಯ/ ಗಂಡನ ಹೆಸರು | : | ಚಿಕ್ಕಯ್ಯ |
| ವಯಸ್ಸು | : | 52 ವರ್ಷ |
| ಉದ್ಯೋಗ | : | ವ್ಯವಸಾಯ |
| ವಾಸ ಸ್ಥಳ | : | ಶಾಂತಿಪುರ |

**ದಿನಾಂಕ 27.09.2025 ರಂದು ಸಾಕ್ಷಿಗೆ ಪ್ರಮಾಣ ಭೋಧಿಸಲಾಯಿತು.**

**ಮುಖ್ಯ ವಿಚಾರಣೆ:- ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ಆರೋಪಿತರು ಗೊತ್ತು, ನಮ್ಮ ಊರಿನವರು. ನಿಪಿ 3 ರಲ್ಲಿ ಇರುವ ಸಾಕ್ಷಿ ಸಹಿಯನ್ನು ನಿಪಿ 3 ಬಿ ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಪೊಲೀಸ್ ಠಾಣೆಯಲ್ಲಿ ಸುಮಾರು 10 ವರ್ಷಗಳ ಹಿಂದೆ ಮಾಡಿರುತ್ತೇನೆ. ಯಾವ ವಿಚಾರಕ್ಕೆ ಮಾಡಿರುತ್ತೇನೆ ಎಂದು ಗೊತ್ತಿಲ್ಲ. ನನ್ನ ಸಮಕ್ಷಮ ಬೇರೆ ಯಾರು ಸಹಿ ಮಾಡಿರುತ್ತಾರೆ ಎಂದು ಗೊತ್ತಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಮಾನ್ಯ ಅಭಿಯೋಜಕರು ಪಾಟೀ ಸವಾಲಿಗೆ ಅನುಮತಿ ಕೋರಿದ್ದು, ನೀಡಲಾಯಿತು.)**

**ಪಾಟೀ ಸವಾಲುಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದ**

ದಿಃ 24.09.2012 ರಂದು ಶಾಂತಿಪುರ ಗ್ರಾಮ, ಕಬಿನಿ ಬಲದಂತೆ ನಾಲೆಗೆ ಸೇರಿದ ಪಶ್ಚಿಮಕ್ಕೆ ಇರುವ ಸಾರ್ವಜನಿಕ ತಿರುಗಾಡುವ ರಸ್ತೆಯಲ್ಲಿ ಮಹಜರನ್ನು ಜರುಗಿಸಿದ್ದು, ಆರೋಪಿತರು ಅಕ್ರಮ ಗುಂಪು ಕಟ್ಟಿಕೊಂಡು ಕಲ್ಲು ಮತ್ತು ಇಟ್ಟಿಗೆ ಚೂರುಗಳನ್ನು ಹಿಡಿದುಕೊಂಡು ಪೊಲೀಸರ ಮೇಲೆ ಎಸೆದು ಕಾನೂನು ಮತ್ತು ಸುವ್ಯವಸ್ಥೆಗೆ ಧಕ್ಕೆವುಂಟು ಮಾಡಿ ಸರ್ಕಾರಿ ಕೆಲಸಕ್ಕೆ ಅಡಿಪಡಿಸಿರುತ್ತಾರೆ ಎನ್ನುವ ಜಾಗದಲ್ಲಿ ಮಹಜರ ಕ್ರಮ ಜರುಗಿಸಿದ್ದು ಸದರಿ ಮಹಜರನ್ನು 10.30 ರಿಂದ 11.30 ಜರುಗಿಸಿದ್ದು ಅದಕ್ಕೆ ನಾನು, ಚಾಸಾ 1 ಮತ್ತು ಚಾಸಾ 3 ರವರು ಸಹಿ ಮಾಡಿರುತ್ತಾರೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಗಣಕೀಕರಣಗೊಳಿಸಲಾಯಿತು).

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ.ದ.ನ್ಯಾ. ದಂಡಾಧಿಕಾರಿಗಳು, ಹೆಚ್.ಡಿ.ಕೋಟೆ.**